# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 1059 (1211) |
| **ಸದಸ್ಯರ ಹೆಸರು** | : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ** | : 07-03-2022 |
| **ಉತ್ತರಿಸಬೇಕಾದ ಸಚಿವರು** | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 2 ವರ್ಷಗಳಿಂದ ವ್ಯಾಪಕವಾಗಿ ಹಬ್ಬುತ್ತಿರುವ ಕೋವಿಡ್‌ನಿಂದ ರಾಜ್ಯದ್ಯಂತ ಶಾಲೆಗಳು ಮುಚ್ಚಿಹೋಗಿ ಶಾಲಾ ವಿದ್ಯಾರ್ಥಿಗಳಿಗೆ ಅದರಲ್ಲೂ ಗ್ರಾಮಾಂತರ ಶಾಲಾ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದಲ್ಲಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಆ) | ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಈ ಬಗ್ಗೆ ಯಾವುದಾದರೂ ಸಮೀಕ್ಷೆ / ಅಧ್ಯಯನ ನಡೆಸಿದೆಯೇ; (ಪೂರ್ಣ ವಿವರ ನೀಡುವುದು) | ಸಮಗ್ರ ಶಿಕ್ಷಣದ ವತಿಯಿಂದ 1 ರಿಂದ 8ನೇ ತರಗತಿಯವರಗೆ ಬೇಸ್ ಲೈನ್ ಸಮೀಕ್ಷೆ ಮಾಡಲಾಗಿದೆ. |
| ಇ) | ಶಾಲೆಗಳಲ್ಲಿ ವಿದ್ಯಾಭ್ಯಾಸದಿಂದ ವಂಚಿತರಾಗಿರುವ ಮಕ್ಕಳಿಗೆ ಅನ್ ಲೈನ್ ಶಿಕ್ಷಣ ನೀಡಲು ಸರ್ಕಾರ ಚಿಂತಿಸುತ್ತಿದೆಯೇ; ಹಾಗಿದ್ದಲ್ಲಿ, ಈ ವಿದ್ಯಾರ್ಥಿಗಳಿಗೆ ಆನ್‌ಲೈನ್ ಶಿಕ್ಷಣಕ್ಕೆ ಅಗತ್ಯವಿರುವ ಸ್ಮಾರ್ಟ್‌ಫೋನ್, ಟ್ಯಾಬ್ಲೇಟ್, ಲ್ಯಾಪ್‌ಟಾಪ್ ಹಾಗೂ ಅತಿ ಮುಖ್ಯವಾದ ಇಂಟರ್‌ನೆಟ್‌ನ್ನು ಗ್ರಾಮಾಂತರ ಪ್ರದೇಶಗಳಿಗೆ ಒದಗಿಸಲು ಕಾರ್ಯಕ್ರಮ ರೂಪಿಸಿದೆಯೇ; (ಪೂರ್ಣ ವಿವರ ನೀಡುವುದು) | 2020-21ನೇ ಸಾಲಿನಲ್ಲಿ ಕೋವಿಡ್ -19 ಸಾಂಕ್ರಾಮಿಕ ರೋಗದ ಪ್ರಯುಕ್ತ ಶಾಲೆಗಳು ಪ್ರಾರಂಭ ಮಾಡಲು ಸಾಧ್ಯವಾಗಿರುವುದಿಲ್ಲ. ಅದ ಕಾರಣ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ರೇಡಿಯೋ ಹಾಗೂ ದೂರದರ್ಶನ ಚಂದನ ವಾಹಿನಿಯಲ್ಲಿ ಸಂವೇದ ಕಾರ್ಯಕ್ರಮದ ಮೂಲಕ ಎಲ್ಲಾ ವಿಷಯದ ಪಾಠಗಳನ್ನು ನುರಿತ ಶಿಕ್ಷಕರಿಂದ ಪ್ರಸಾರ ಮಾಡಲಾಗಿದೆ. ಅಕಾಶವಾಣಿ ರೇಡಿಯೋ ಕಾರ್ಯಕ್ರಮದಲ್ಲಿ ಬೆಳಿಗ್ಗೆ 10.00 ರಿಂದ 10.15 ರವರೆಗೆ 1 ಮತ್ತು 2ನೇ ತರಗತಿ ವಿದ್ಯಾರ್ಥಿಗಳಿಗೆ ಮತ್ತು 10.15 ರಿಂದ 10.30ರವರೆಗೆ 3 ಮತ್ತು 4ನೇ ತರಗತಿ ವಿದ್ಯಾರ್ಥಿಗಳಿಗೆ ಡಿ.ಎಸ್.ಇ.ಆರ್.ಟಿ ರವರು ತಯಾರಿಸಿದ ಆಡಿಯೋ ಪಾಠಗಳನ್ನು ಪ್ರಸಾರ ಮಾಡಲಾಗಿದೆ. ಇದೇ ಪಾಠಗಳನ್ನು ರಾಜ್ಯದ ಎಫ್.ಎಂ ರೇನ್ಬೋ ಚಾನಲ್‌ನಲ್ಲಿ ಮರುಪ್ರಸಾರ ಮಾಡಲಾಗಿದೆ.<br>ದೀಕ್ಷಾ ಪೋರ್ಟಲ್‌ನಲ್ಲಿ 1 ರಿಂದ 10ನೇ ತರಗತಿಯ ಎಲ್ಲಾ ವಿಷಯಗಳನ್ನು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ಸರಿಸುಮಾರು 22,000ಕ್ಕೂ ಹೆಚ್ಚು ಪಠ್ಯ ಪುಸ್ತಕವನ್ನು ಇ-ಕಂಟೆಂಟ್ ಮೂಲಕ ಅಪ್ಲೋಡ್ ಮಾಡಲಾಗಿದೆ. ದೀಕ್ಷಾ ಪೋರ್ಟಲ್‌ನಲ್ಲಿ 1 ರಿಂದ 12ನೇ ತರಗತಿಯ ಪಠ್ಯ ಪುಸ್ತಕದ ಇ- ಕಂಟೆಂಟ್‌ಗಳಿಗೆ QR code ತಯಾರಿಸಿ ಎನ್ರಜೈಸ್ ಮಾಡಿ ಮಕ್ಕಳ ಕಲಿಕೆಗೆ ಅನುಕೂಲ |

| | | |
|---|---|---|
| | | ಮಾಡಿಕೊಡಲಾಗಿದೆ. ವಿದ್ಯಾರ್ಥಿಗಳಲ್ಲಿ ಲಭ್ಯವಿರುವ ಮೊಬೈಲ್ ಮೂಲಕ ದೀಕ್ಷಾ ಪೋರ್ಟಲ್‌ನ್ನು ಡೌನ್‌ಲೋಡ್ ಮಾಡಿ ತಮ್ಮ ತರಗತಿಯ ಎಲ್ಲಾ ವಿಷಯದ ಪಠ್ಯ ಪುಸ್ತಕವನ್ನು ಹಲವಾರು ಬಾರಿ ಓದಲು ಅವಕಾಶ ಕಲ್ಪಿಸಿ ಕೊಡಲಾಗಿದೆ.<br>ಕೋವಿಡ್‌ನಿಂದಾಗಿ ಭೌತಿಕ ತರಗತಿಗಳು ನಡೆಯದೆ ಇದ್ದಾಗ ಶಾಲಾ ವಿದ್ಯಾರ್ಥಿಗಳು ಕಲಿಕಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಪರ್ಯಾಯ ಬೋಧನಾ ವಿಧಾನಗಳನ್ನು ಅನುಸರಿಸಲಾಗಿದೆ.<br>ದೂರದರ್ಶನ ಚಂದನವಾಹಿನಿಯಲ್ಲಿ 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ವೀಡಿಯೋ ಪಾಠಗಳ ಪ್ರಸಾರ ಮಾಡಲಾಗಿದೆ. ಅಲ್ಲದೆ, ಈ ಪಾಠಗಳನ್ನು 'ದೀಕ್ಷಾ' ಪೋರ್ಟಲ್ ಮತ್ತು ಜ್ಞಾನದೀಪ ಯೂಟ್ಯೂಬ್ ಚಾನಲ್‌ನಲ್ಲಿ ಅಳವಡಿಸಲಾಗಿದೆ.<br>'ವಿದ್ಯಾಗಮ' ಕಾರ್ಯಕ್ರಮದಡಿ ಶಿಕ್ಷಕರು ವಿದ್ಯಾರ್ಥಿಗಳ ನೆರೆಹೊರೆ ತಂಡ ರಚಿಸಿ, ಆ ತಂಡಗಳಿಗೆ ಭೇಟಿ ನೀಡಿ, ವಿದ್ಯಾರ್ಥಿಗಳು ನಿರ್ವಹಿಸಬೇಕಾದ ಕಲಿಕಾ ಚಟುವಟಿಕೆಗಳ ಮಾರ್ಗದರ್ಶನ ಮಾಡಿರುತ್ತಾರೆ ಮತ್ತು ಅವರ ಶಾಲಾ ಚಟುವಟಿಕೆಗಳ ಮೌಲ್ಯಮಾಪನ ನಿರ್ವಹಿಸಿರುತ್ತಾರೆ.<br>ಪ್ರಸ್ತುತ, ರಾಜ್ಯದಲ್ಲಿ ಭೌತಿಕ ತರಗತಿಗಳು ಪ್ರಾರಂಭವಾಗಿದೆ. ಆದರಿಂದ, ಆನ್‌ಲೈನ್ ತರಗತಿಗಳ ಅಗತ್ಯವಿರುವುದಿಲ್ಲ. 2022-23ನೇ ಸಾಲಿನಲ್ಲಿ ಕಲಿಕಾ ನಷ್ಟ ಸರಿತೂಗಿಸಲು 'ಕಲಿಕಾ ಚೇತರಿಕೆ' ಕಾರ್ಯಕ್ರಮ ರೂಪಿಸಲಾಗುತ್ತಿದೆ. |
| ಈ) | ರಾಜ್ಯ ಸರ್ಕಾರ ಇಂತಹ ವ್ಯವಸ್ಥೆಗಳನ್ನು ಸ್ಥಾಪಿಸದೇ, ತರಾತುರಿಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸುತ್ತಿರುವುದರಿಂದ ಬಹುತೇಕ ಗ್ರಾಮೀಣ ವರ್ಗದ ವಿದ್ಯಾರ್ಥಿಗಳ ಶಿಕ್ಷಣಮಟ್ಟ ಕುಂದಿ, ಇವರು ಪಟ್ಟಣ/ನಗರ ಪ್ರದೇಶಗಳ ವಿದ್ಯಾರ್ಥಿಗಳೊಂದಿಗೆ ಸರಿಸಮಾನರಾಗಿ ಬದಕುವ ಸಾಮರ್ಥ್ಯವನ್ನು ಕಳೆದು ಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? | ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಸರ್ಕಾರವು ಹಂತ ಹಂತವಾಗಿ ಶಿಕ್ಷಣ ಮಂತ್ರಾಲಯ, ಭಾರತ ಸರ್ಕಾರ, ಇವರು ನೀಡಿರುವ Task Points ಗಳನ್ನು 2020 ರಿಂದ 2030 ರವರೆಗಿನ ಕಾಲಸೂಚಿಯಲ್ಲಿ ಅನುಷ್ಠಾನ ಮಾಡಲು ಕ್ರಮ ಕೈಗೊಂಡಿದೆ. ರಾಷ್ಟ್ರೀಯ ಶಿಕ್ಷಣ ನೀತಿ 2020ರ ಶಿಫಾರಸ್ಸಿನಂತೆ ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೂ ಸಮಾನ ಮಟ್ಟದ ಕಲಿಕಾ ಅನುಭವಗಳನ್ನು ಒದಗಿಸುವಂತಹ ವ್ಯವಸ್ಥೆ ಸ್ಥಾಪಿಸುವ ನಿಟ್ಟಿನಲ್ಲಿ ಇಲಾಖೆಯು ಕಾರ್ಯನಿರ್ವಹಿಸುತ್ತಿದೆ. ಶಿಕ್ಷಣ ವಂಚಿತ ಮಕ್ಕಳಿರುವ ಪ್ರದೇಶಗಳನ್ನು ಗುರುತಿಸಿ ಈ ಭಾಗದ ಮಕ್ಕಳಿಗೆ ಹೆಚ್ಚು ಅವಕಾಶಗಳನ್ನು ನೀಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. |

**ಇಪಿ 99 ಪಿಜಿಸಿ 2022**

**(ಬಿ.ಸಿ. ನಾಗೇಶ್)**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ**
**ಸಕಾಲ ಸಚಿವರು**